ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ಹಾವೇರಿ ಜಿಲ್ಲೆ, ಹಾನಗಲ್ ತಾಲ್ಲೂಕಿನಲ್ಲಿ ಕಲುಷಿತ ನೀರು ಪೂರೈಕೆ ಬಗ್ಗೆ

ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

191 (180) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಾವೇರಿ ಜಿಲ್ಲೆಯ ಹಾನಗಲ್ ನಗರದ ಸಾರ್ವಜನಿಕರಿಗೆ ಪ್ರತನಿತ್ಯ ಕುಡಿಯಲು, ಹಾಗೂ ದಿನಬಳಕೆಗೆ ಕಲುಷಿತ ನೀರು ಸರಬರಾಜು ಆಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಇದಕ್ಕೆ ಕಾರಣಗಳೇನು ;

(ಆ) ಕಲುಷಿತ ನೀರು ಪೂರೈಕೆಯಿಂದ ಸಾರ್ವಜನಿಕ ಆರೋಗ್ಯಕ್ಕೆ ತೊಂದರೆಯುಂಟಾದರೆ ಹೊಣೆಗಾರರು ಯಾರು ;

(ಇ) ಹಾವೇರಿ ಜಿಲ್ಲೆಯ ಹಾನಗಲ್ ನಗರದ ಜನರಿಗೆ ಶುದ್ಧ ನೀರು ಪೂರೈಸಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ; ಹಾಗೂ ಬೇಕಾಗುವ ಕಾಲಾವಕಾಶ ಎಷ್ಟು ?